ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2012-13ನೇ ಸಾಲಿನ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯ ಕೇಂದ್ರ ಪಾಲಿನ ಸಹಾಯಧನ ಪಾವತಿಸಲು ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/42/ಜೈಅಯೋ/2014 ದಿ. 24.01.2015

2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾಸನ ಜಿಲ್ಲೆ ರವರ ಪತ್ರ ಸಂಖ್ಯೆ: ಜಿಪಂಹಾ/ಜೈಅಯೋ/ಯೋ.ಅ/1/2014-15 ದಿನಾಂಕ 05.02.2015

*****

ಪ್ರಸ್ತಾವನೆ :

2012-13ನೇ ಸಾಲಿನಲ್ಲಿ ಹಾಸನ ಜಿಲ್ಲಾ ಪಂಚಾಯಿತಿಯಲ್ಲಿ ರಾಷ್ಟ್ರೀಯ ಜೈವಾನಿಲ ಅಭಿವೃದ್ಧಿ ಯೋಜನೆಯಡಿ ಒಟ್ಟು 1076 ಸ್ಥಾವರಗಳು ಪೂರ್ಣಗೊಂಡಿದ್ದು, ಇದರಲ್ಲಿ 540 ಸ್ಥಾವರಗಳಿಗೆ ರೂ.46.98 ಲಕ್ಷಗಳನ್ನು ಈಗಾಗಲೇ ಅನುದಾನ ಬಿಡುಗಡೆ ಮಾಡಲಾಗಿದೆ. ಬಾಕಿ ಉಳಿದ 536 ಸ್ಥಾವರಗಳಿಗೆ ರೂ.46.632 ಲಕ್ಷಗಳನ್ನು ಬಿಡುಗಡೆ ಮಾಡಬೇಕಾಗಿರುತ್ತದೆ. ಈ ಪೈಕಿ ಓದಲಾದ (1)ರ ಸರ್ಕಾರಿ ಆದೇಶದಲ್ಲಿ ರೂ.26.70 ಲಕ್ಷಗಳನ್ನು ಹಾಸನ ಜಿಲ್ಲಾ ಪಂಚಾಯಿತಿಗೆ ಬಿಡುಗಡೆ ಮಾಡಲಾಗಿದೆ. ಇನ್ನು ರೂ.19.932 ಲಕ್ಷಗಳನ್ನು ಬಿಡುಗಡೆ ಮಾಡಬೇಕೆಂದು ಓದಲಾದ (2)ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾಸನ ಜಿಲ್ಲೆ ರವರು ಕೋರಿರುತ್ತಾರೆ.

ಈ ಪ್ರಯುಕ್ತ ಹಾಸನ ಜಿಲ್ಲಾ ಪಂಚಾಯಿತಿಗೆ 2012-13ನೇ ಸಾಲಿಗೆ ರೂ.19.932 ಲಕ್ಷಗಳನ್ನು ಬಿಡುಗಡೆ ಮಾಡಬೇಕಾಗಿರುತ್ತದೆ. ಆದ್ದರಿಂದ 2014-15ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 2810-60-196-6-01-300ರಡಿ ರೂ.13.283 ಲಕ್ಷಗಳನ್ನು (ರೂಪಾಯಿ ಹದಿಮೂರು ಲಕ್ಷದ ಇಪ್ಪತ್ತೆಂಟು ಸಾವಿರದ ಮೂರು ನೂರು ಮಾತ್ರ) ಹಾಸನ ಜಿಲ್ಲಾ ಪಂಚಾಯಿತಿಗೆ ಬಿಡುಗಡೆ ಮಾಡಲು ತೀರ್ಮಾನಿಸಿದೆ ಪ್ರಯುಕ್ತ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಗ್ರಾಅಪ/42/ಜೈಅಯೋ/2014(ಪಿ) ಬೆಂಗಳೂರು, ದಿನಾಂಕ 25.03.2015**

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ, 2014-15ನೇ ಸಾಲಿನಲ್ಲಿ ಲೆಕ್ಕ ಶೀರ್ಷಿಕೆ 2810-60-196-6-01-300ರಡಿ **ರೂ.13.283 ಲಕ್ಷಗಳನ್ನು (ರೂಪಾಯಿ ಹದಿಮೂರು ಲಕ್ಷದ ಇಪ್ಪತ್ತೆಂಟು ಸಾವಿರದ ಮೂರು ನೂರು ಮಾತ್ರ)** ಹಾಸನ ಜಿಲ್ಲಾ ಪಂಚಾಯಿತಿಗೆ ಬಿಡುಗಡೆ ಮಾಡಲಾಗಿದೆ.

ಸದರಿ ಜಿಲ್ಲಾ ಪಂಚಾಯಿತಿಗೆ ಬಿಡುಗಡೆ ಮಾಡುತ್ತಿರುವ ಅನುದಾನವನ್ನು ಕಾರ್ಯಕ್ರಮದ ಮಾರ್ಗಸೂಚಿಗಳನ್ವಯ ವಿನಿಯೋಗಿಸತಕ್ಕದ್ದು. ಸದರಿ ಅನುದಾನವನ್ನು ಮಹಾಲೇಖಪಾಲರ ಲೆಕ್ಕ ತಪಾಸಣೆಗೊಳಪಟ್ಟು ಬಿಡುಗಡೆ ಮಾಡಲಾಗಿದೆ.

ಈ ಆದೇಶವನ್ನು ಇಲಾಖಾ ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ : ಗ್ರಾಅಪ/230/ಪಿಬಿಎಸ್/2015 ದಿನಾಂಕ 24.03.2015 ರಲ್ಲಿ ಸಹಮತಿಯನ್ನು ಪಡೆದು ಹೊರಡಿಸಲಾಗಿದೆ.

"ಗಾಂಧಿ ಸಾಕ್ಷಿ ಕಾಯಕ" ತತ್ರಾಂಶದಲ್ಲಿ ಕಡ್ಡಾಯವಾಗಿ ಅಳವಡಿಸಬೇಕು ಎಂಬ ಷರತ್ತಿಗೊಳಪಟ್ಟು ಈ ಅನುದಾನ ಬಿಡುಗಡೆ ಮಾಡಲಾಗಿದೆ.

ಈಗ ಬಿಡುಗಡೆ ಮಾಡುತ್ತಿರುವ ಅನುದಾನಕ್ಕೆ ವೆಚ್ಚ ಭರಿಸಿ, ಈ ಅನುದಾನ ಬಳಕೆ ಮಾಡಿಕೊಂಡಿರುವ ಫಲಾನುಭವಿಗಳ ವಿವರಗಳನ್ನು ಒದಗಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್. ಕೃಷ್ಣಪ್ಪ) 25/3/15
ನಿರ್ದೇಶಕರು (ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಹಾಸನ ಜಿಲ್ಲೆ
4. ಉಪಕಾರ್ಯದರ್ಶಿ (ಅಭಿವೃದ್ಧಿ)/ ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ಹಾಸನ ಜಿಲ್ಲೆ
5. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
6. ಜಿಲ್ಲಾ ಖಜಾನಾಧಿಕಾರಿಗಳು, ಹಾಸನ ಜಿಲ್ಲೆ
7. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
8. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ನಂ.49, ಸೆಕೆಂಡ್ ಬ್ಲಾಕ್, ಸೆಕೆಂಡ್ ಫ್ಲೋರ್, ಖನಿಜ ಭವನ, ಸೌತ್ ಎಂಟ್ರೆನ್ಸ್, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
9. ರಕ್ಷಾ ಕಡತಕ್ಕೆ/ಹೆಚ್ಚುವರಿ ಪ್ರತಿ.